**ಕರ್ನಾಟಕ ಸರ್ಕಾರ**

ಕ್ರಮಾಂಕ : ಡಿಪಿಎಆರ್ 174 ಕೆಒಎಲ್ 2000

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ : 18-08-2000.

**ಸುತ್ತೋಲೆ**

ವಿಷಯ :- ಸರ್ಕಾರಿ ವಾಹನಗಳ ಮೇಲೆ ಕನ್ನಡ ನೊಂದಣಿ ಸಂಖ್ಯೆಯನ್ನು ಅಳವಡಿಸುವ ಬಗ್ಗೆ.

ಉಲ್ಲೇಖ : ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಅರೆ ಸರ್ಕಾರಿ ಪತ್ರ ಸಂಖ್ಯೆ : ಕಅಪ್ರಾ / ಅ/400/2000, ದಿನಾಂಕ : 20-07-2000

------

ಸರ್ಕಾರಿ ವಾಹನಗಳ ಮೇಲೆ ಕೇವಲ ಆಂಗ್ಲ ಭಾಷೆಯ ಅಕ್ಷರ ಮತ್ತು ಸಂಖ್ಯೆಗಳಿದ್ದು, ಇದರ ಜೊತೆಗೆ ಕನ್ನಡ ಅಕ್ಷರ ಮತ್ತು ಸಂಖ್ಯೆಗಳ ಫಲಕವನ್ನು ಬರೆಸುವುದನ್ನು ಕಡ್ಡಾಯಗೊಳಿಸುವಂತೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಉಲ್ಲೇಖಿತ ಪತ್ರದಲ್ಲಿ ಸೂಚಿಸಿರುವುದನ್ನು ಸರ್ಕಾರವು ಪರಿಶೀಲಿಸಿದೆ.

ಮಾನ್ಯ ಸಚಿವರ : ರಾಜ್ಯ ಸಚಿವರ ಹಾಗೂ ಅತಿಥೇಯ ಸಂಸ್ಥೆಯ ವಾಹನಗಳು ಸೇರಿದಂತೆ ಸರ್ಕಾರದ ಎಲ್ಲಾ ವಾಹನಗಳ ಮೇಲೆ ಪ್ರಸ್ತುತ ಇರುವ ನೊಂದಣಿ ಸಂಖ್ಯೆಯ ಜೊತೆಗೆ ಕನ್ನಡ ಅಕ್ಷರ ಹಾಗೂ ಸಂಖ್ಯೆಗಳ ಫಲಕವನ್ನು ಅಳವಡಿಸುವಂತೆ ಸೂಚಿಸಲಾಗಿದೆ.

ಮೇಲೆ ಸೂಚಿಸಿದ ಅಂಶಗಳನ್ನು ತಪ್ಪದೆ ಪಾಲಿಸಬೇಕೆಂದು ಸಂಬಂಧಪಟ್ಟ ಎಲ್ಲರಿಗೂ ಈ ಮೂಲಕ ತಿಳಿಸಲಾಗಿದೆ.

ಸಹಿ/-

**(ಎಂ.ಎಸ್. ಗಣಪತಿ)**

ಸರ್ಕಾರದ ಅಧೀನ ಕಾರ್ಯದರ್ಶಿಗಳು

ಸಿಆಸು ಇ (ರಾಜ್ಯ ಶಿಷ್ಟಾಚಾರ)

ಇವರಿಗೆ :

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.

ಪ್ರತಿ :

1. ಮಾನ್ಯ ಸಚಿವರ : ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು.
2. ಮಾನ್ಯ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿಗಳು.
3. ವಿಶೇಷಾಧಿಕಾರಿಗಳು, ಕುಮಾರ ಕೃಪ ಅತಿಥಿ ಗೃಹ, ಬೆಂಗಳೂರು.
4. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
5. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
6. ಶಾಖಾ ರಕ್ಷಾ ಕಡತಕ್ಕೆ : ಹೆಚ್ಚುವರಿ ಪ್ರತಿಗಳು.